# ಪ್ರಧಾನ ಸಿವಿಲ್ ನ್ಯಾಯಾದೀಶರು, ಜೆ.ಎಮ್.ಎಫ್. ಸಿ–2 ರಾಯಚೂರು

**ಸಿ.ಸಿ.ನಂ. 4320/2022**

**ಪಿ.ಡಬ್ಲ್ಯೂ: 4**
**ಸಿ.ಡಬ್ಲ್ಯೂ: 3**

| | | |
|---|---|---|
| ಸಾಕ್ಷಿದಾರರ ಹೆಸರು | : | ರಾಜೇಂದ್ರಗೌಡ |
| ತಂದೆಯ ಹೆಸರು | : | ತಿಮ್ಮನಗೌಡ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ರಾಯಚೂರು. |

ಇಂದು ದಿ:12–04–2023 ರಂದು ಸಾಕ್ಷಿಯನ್ನು ಪುನ: ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ನನಗೆ ಚಾಸಾ 2 ರವರ ಪರಿಚಯವಿಲ್ಲ. ನನಗೆ ಆರೋಪಿತರು ಪರಿಚಯವಿಲ್ಲ. ಈಗ ಸಾಕ್ಷಿಗೆ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ಮತ್ತು ಅದರ ಮೇಲೆ ಇರುವ ತನ್ನ ಸಹಿಯನ್ನು ಗುರುತಿಸಿರುವುದರಿಂದ, ಸದರಿ ಪಂಚನಾಮೆಯನ್ನು ಈಗಾಗಲೇ ನಿ:ಪಿ–1 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿ:ಪಿ–1(ಬಿ) ಎಂದು ಗುರುತಿಸಲಾಯಿತು. ನಿ:ಪಿ–1 ಕ್ಕೆ ನಾನು ಪೋ.ಠಾ. ಯಲ್ಲಿ ಸಹಿ ಮಾಡಿರುತ್ತೇನೆ. ನನಗೆ ನಿ:ಪಿ–1 ರ ಒಳಾಂಶಗಳ ಬಗ್ಗೆ ಮಾಹಿತಿ ಇಲ್ಲ. ಪೊಲಿಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮತ್ತು ಜಪ್ತಿ ಪಂಚನಾಮೆ ಮಾಡಿರುವುದಿಲ್ಲ.

**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಪ್ರಾರ್ಥಿಸುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಸ.ಸ.ಅ. ರವರಿಂದ:**

ದಿ: 17–10–2021 ರಂದು ಬೆಳಿಗ್ಗೆ 08–30 ರಿಂದ 10–30 ಗಂಟೆಯವರೆಗೆ ನನ್ನ ಮತ್ತು ಚಾಸಾ–2 ರವರ ಸಮಕ್ಷಮ ನಿ:ಪಿ–1 ರಂತೆ ಸ್ಥಳದ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಕಾಲಕ್ಕೆ ಒಂದುಕೆಂಪು ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ 1 ಕೆ.ಜಿ. ಸಾಮಾರ್ಥ್ಯದ 16 ಪ್ಲಾಸ್ಟಿಕ್ ಕವರಗಳಲ್ಲಿ 16 ಕೆ.ಜಿ. ಸಿಹೆಚ್. ಪೌಡರ್ ಆರೋಪಿತರ ಕಡೆಯಿಂದ ನನ್ನ ಮತ್ತು ಚಾ.ಸ.2.ರವರ ಸಮಕ್ಷಮ ಪೊಲೀಸರು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಜಪ್ತಿ

ಪಡಿಸಿಕೊಂಡ ವಸ್ತುಗಳಿಂದ 500 ಗ್ರಾಂ. ಸಿಹೆಚ್. ಪೌಡರ್ ರಾಸಾಯನಿಕ ಪರೀಕ್ಷೆಗಾಗಿ ಪ್ರತ್ಯೇಕವಾಗಿ ತೆಗೆದು ಮಹಜರು ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.1 ರಲ್ಲಿರುವ ಎಲ್ಲ ಒಳಾಂಶಗಳು ಗೊತ್ತಿದ್ದರು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಪಾಟೀ ಸವಾಲು ಇಲ್ಲ ಎಂದು ಹೇಳುತ್ತಾರೆ.

**ಮರು ವಿಚಾರಣೆ: ಇಲ್ಲ;**

(ಸಾಕ್ಷಿಯು ನೀಡಿದ ಸಾಕ್ಷವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ.ಸರಿ ಇದೆ.**

ಸಹಿ/-

ಜೆ.ಎಂ.ಎಫ್.ಸಿ.2, ರಾಯಚೂರು